ರಾಣೆಬೆನ್ನೂರು ತಾಲ್ಲೂಕಿನ ಅಂತರವಳ್ಳಿ ಗ್ರಾಮದ ಹತ್ತಿರ ಗಿಂಡಿಹಳ್ಳಕ್ಕೆ ಒಡ್ಡುಕಟ್ಟಿ ಕೆರೆ ಕಟ್ಟುವ ಬಗ್ಗೆ

೧೯೨. ಶ್ರೀ ಕೆ. ಬಿ. ಕೋಳಿವಾಡ್ (ರಾಣೆಬೆನ್ನೂರು).—ಮಾನ್ಯ ಲೋಕೋಪಯೋಗಿ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂತ್ರಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಣೆಬೆನ್ನೂರು ತಾಲ್ಲೂಕಿನ ಅಂತರವಳ್ಳಿ ಗ್ರಾಮದ ಹತ್ತಿರ ಗಿಂಡಿಹಳ್ಳಕ್ಕೆ ಒಡ್ಡುಕಟ್ಟಿ ಜಾಗತಿಕ ಬ್ಯಾಂಕಿನ ನೆರವಿನೊಂದಿಗೆ ಕೆರೆ ಕಟ್ಟುವ ಯೋಜನೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ;

ಆ) ಹಾಗಿದ್ದಲ್ಲಿ, ಸದರಿ ಯೋಜನೆಯು ಸ್ಥಗಿತಗೊಂಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ;

ಇ) ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು ;

ಈ) ಸದರಿ ಯೋಜನೆಯನ್ನು ಪುನಃ ಯಾವಾಗ ಕೈಕೊಳ್ಳಲಾಗುವುದು ?

ಶ್ರೀ ಹೆಚ್. ಡಿ. ದೇವೇಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಹೌದು.

ಆ) ಕಾರ್ಯ ಸಾಧುವಲ್ಲವಾದುದರಿಂದ ಕೈಬಿಡಲಾಗಿದೆ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಸೂಳ್ಯ ವಿಧಾನ ಸಭಾಕ್ಷೇತ್ರದಲ್ಲಿ ಶಾಲಾ ಕಾಲೇಜುಗಳಲ್ಲಿ ಶಿಕ್ಷಕರ ಮತ್ತು ಉಪನ್ಯಾಸಕರ ಹುದ್ದೆಗಳು ಖಾಲಿ ಇರುವ ಬಗ್ಗೆ

೨೨೮. ಶ್ರೀ ಕೆ. ಕುಶಾಲ (ಸೂಳ್ಯ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಸೂಳ್ಯ ವಿಧಾನಸಭಾ ಕ್ಷೇತ್ರದ ಸೂಳ್ಯ ತಾಲ್ಲೂಕು ಮತ್ತು ಪುತ್ತೂರು ತಾಲ್ಲೂಕಿನ ಬೆಳ್ಳಾರೆ, ಕಾಣಿಯೂರು, ಎಣಿಕಲ್ಲು ಕಡಬಗಳಲ್ಲಿರುವ ಶಾಲಾ ಕಾಲೇಜುಗಳಲ್ಲಿ ಶಿಕ್ಷಕರ ಮತ್ತು ಉಪನ್ಯಾಸಕರ ಹುದ್ದೆಗಳು ಬಹಳ ವರ್ಷಗಳಿಂದ ಖಾಲಿ ಬಿದ್ದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಸದರಿ ಹುದ್ದೆಗಳನ್ನು ತುಂಬಲು ಶೀಘ್ರವಾಗಿ ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಡಿ. ಮಂಜುನಾಥ್ (ಶಿಕ್ಷಣ ಮಂತ್ರಿಗಳು).—

ಅ) ಬಂದಿದೆ.

ಆ) ಪ್ರಾಥಮಿಕ ಶಾಲಾ ಶಿಕ್ಷಕರ ಖಾಲಿ ಹುದ್ದೆಗೆ ಮುಂದಿನ ಜಿಲ್ಲಾ ಆಯ್ಕೆ ಸಮಿತಿಯಿಂದ ನೇಮಕ ಮಾಡಿದ ಅಭ್ಯರ್ಥಿಗಳಿಂದ ತುಂಬಲಾಗುವುದು. ಕಿರಿಯ ಮಹಾವಿದ್ಯಾಲಯಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ತುಂಬಲು ಶೀಘ್ರ ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಪ್ರೌಢಶಾಲಾ ಸಹಾಯಕ ಶಿಕ್ಷಕರ ಖಾಲಿ ಹುದ್ದೆಗೆ ಗುತ್ತಿಗೆ ಆಧಾರದ ಅಭ್ಯರ್ಥಿಗಳ ನೇಮಕಾತಿಯಿಂದ ತುಂಬಲಾಗಿದೆ.